# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☎:0816-2255650, 2273511,ಫ್ಯಾಕ್ಸ್ :0816-2270719

ಸಂಖ್ಯೆ : ತು.ವಿ.: ಪ.ವಿ.:ವಿ.ನಿ.-09:2024-25: 361

ದಿನಾಂಕ:30.07.2024

## :ಅಧಿಸೂಚನೆ:

UUCMS/EMS

ವಿಷಯ: 2023-24 ನೇ ಸಾಲಿನ 2024 ರ ಸೆಪ್ಟಂಬರ್/ಅಕ್ಟೋಬರ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ [ಎಂ.ಬಿ.ಎ. ಎಂ.ಸಿ.ಎ, ಎಲ್.ಎಲ್ ಎಂ ಮತ್ತು ಎಂ.ಬಿ.ಎ ಫೈನಾಸ್ ಹೊರತುಪಡಿಸಿ] II ಮತ್ತು IVನೇ (ನವೀನ ಮತ್ತು ಪೂರಕ ವಿದ್ಯಾರ್ಥಿಗಳ) ಸೆಮಿಸ್ಟರ್‌ಗಳ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, 2020-21ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ಅರ್ಹ(ಪೂರಕ) ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

* * * * *

2023-24 ನೇ ಶೈಕ್ಷಣಿಕ ಸಾಲಿನ 2024 ರ ಸೆಪ್ಟಂಬರ್/ಅಕ್ಟೋಬರ್ ಮಾಹೆಗಳಲ್ಲಿ ನಡೆಯಲಿರುವ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ [ಎಂ.ಬಿ.ಎ. ಎಂ.ಸಿ.ಎ, ಎಲ್.ಎಲ್.ಎಂ ಮತ್ತು ಎಂ.ಬಿ.ಎ ಫೈನಾಸ್ ಹೊರತುಪಡಿಸಿ] II ಮತ್ತು IV (ನವೀನ ಹಾಗೂ ಪೂರಕ) ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಹಾಗೂ EMS ತಂತ್ರಾಂಶದ ಮುಖಾಂತರ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ಅರ್ಹ (ಪೂರಕ) ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪ್ರಸಕ್ತ ಸಾಲಿನ ಸ್ನಾತಕೋತ್ತರ ಪದವಿಗಳ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ (ನವೀನ ಮತ್ತು ಪೂರಕ 2021-22 ನೇ ಶೈಕ್ಷಣಿಕ ಸಾಲಿನಿಂದ 2023-24ನೇ ಶೈಕ್ಷಣಿಕ ಸಾಲಿನವರೆಗೆ) ಸೆಮಿಸ್ಟರ್‌ಗಳಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಸಂಪೂರ್ಣ ದತ್ತಾಂಶವನ್ನು ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (UUCMS) ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದ್ದು, ವಿದ್ಯಾರ್ಥಿಗಳ Login ಮುಖಾಂತರ UUCMS ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ವಿದ್ಯಾರ್ಥಿಗಳು ಭರ್ತಿ ಮಾಡಿದ ಅರ್ಜಿ ನಮೂನೆಗಳನ್ನು ಪರಿಶೀಲಿಸಿ UUCMS ತಂತ್ರಾಂಶದ ಮೂಲಕ ಅನುಮೋದಿಸುವುದು ಹಾಗೂ ವಿದ್ಯಾರ್ಥಿಗಳ ಪ್ರವೇಶಾನುಮೋದನೆ, ಪರೀಕ್ಷೆ ತೆಗೆದುಕೊಳ್ಳುವವರ ಅಂಕಿ-ಅಂಶಗಳನ್ನು ಬಾಹ್ಯವಾಗಿಯೂ ಸಹ ಕ್ರೋಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ 30.08.2024 ದಿನಾಂಕದೊಳಗೆ ವಿದ್ಯಾರ್ಥಿಗಳ ಸಂಖ್ಯೆವಾರು ಹಾಗೂ ಪರೀಕ್ಷಾ ಶುಲ್ಕದ ವಿವರವನ್ನು ಭರ್ತಿ ಮಾಡಿ ಸಲ್ಲಿಸತಕ್ಕದ್ದು.

### II ಮತ್ತು IV (ನವೀನ & ಪೂರಕ) ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕದ ವಿವರಗಳು

| ಪರೀಕ್ಷಾ ಶುಲ್ಕಗಳ ವಿವರ (Freshers UUCMS) | | | |
|---|---|---|---|
| ಕ್ರ.ಸಂ | ಪದವಿಗಳ ವಿವರ | ಪರೀಕ್ಷಾ ಶುಲ್ಕ | ಪೂರಕ (ಒಂದು ವಿಷಯಕ್ಕೆ) |
| 01 | ಎಂ.ಎ (ಕನ್ನಡ, ಇಂಗ್ಲೀಷ್, ಸಮಾಜಶಾಸ್ತ್ರ, ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ ಮತ್ತು ಸಾರ್ವಜನಿಕ ಆಡಳಿತ), ಎಂ.ಕಾಂ ಹಾಗೂ ಎಂ.ಎಸ್ಸಿ ಗಣಿತಶಾಸ್ತ್ರ | 1000.00 | 200.00 |
| 02 | ಎಂ.ಎಸ್ ಡಬ್ಲ್ಯು, ಎಂ.ಕಾಂ(ಐ.ಎಸ್) ಮತ್ತು ಎಂ.ಎಸ್ಸಿ ಮನಃಶಾಸ್ತ್ರ | 1150.00 | 265.00 |
| 03 | ಎಂ.ಎ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ | 1300.00 | 200.00 |
| 04 | ಎಂ.ಎಸ್ಸಿ (ಭೌತಶಾಸ್ತ್ರ, ರಸಾಯನಶಾಸ್ತ್ರ, ಪರಿಸರ ವಿಜ್ಞಾನ, ಜೀವರಸಾಯಶಾಸ್ತ್ರ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ, ಪ್ರಾಣಿಶಾಸ್ತ್ರ, ಸಸ್ಯಶಾಸ್ತ್ರ, ಸಾವಯವ ರಸಾಯನಶಾಸ್ತ್ರ, ವಿದ್ಯುನ್ಮಾನ ಮಾಧ್ಯನ ) ಮತ್ತು ಎಂ.ಎಸ್ ಕಮ್ಯುನಿಕೇಷನ್, ಎಂ.ಎಸ್ಸಿ ಕಂಪ್ಯೂಟರ್ ಸೈನ್ಸ್ ಡೇಟಾ ಸೈನ್ಸ್ | 1600.00 | 200.00 |
| 05 | ಎಂ.ಎಸ್ಸಿ ಜೀವ ತಂತ್ರಜ್ಞಾನ ಮತ್ತು ಸೂಕ್ಷ್ಮ ಜೀವಶಾಸ್ತ್ರ | 2600.00 | 200.00 |
| 06 | ಪಿ.ಜಿ ಡಿಪ್ಲೋಮಾ (Coconut Plantation, Environmental impact) | 1150.00 | 265.00 |

*** ವಿದ್ಯಾರ್ಥಿಯು ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿದ್ದಲ್ಲಿ ಸೆಮಿಸ್ಟರ್‌ವಾರು ಪೂರ್ಣ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಬೇಕು.

(ಪು.ತಿ.ನೋ)

ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು. (ಪ್ರತಿ ಸೆಮಿಸ್ಟರ್‌ಗೆ ಅನ್ವಯಿಸುವಂತೆ)

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ | 156-00 |
| 2. | ಆನ್‌ಲೈನ್ ಅರ್ಜಿ ಶುಲ್ಕ | 30-00 |
| 3. | ಅರ್ಜಿ ಪರಿಶೀಲನಾ ಶುಲ್ಕ | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee) | 40-00 |

| ಪರೀಕ್ಷಾ ಶುಲ್ಕಗಳ ವಿವರ (Repeaters EMS -2020-21) | | | |
|---|---|---|---|
| ಕ್ರ.ಸಂ | ಪದವಿಗಳ ವಿವರ | ಪರೀಕ್ಷಾ ಶುಲ್ಕ | ಪೂರಕ (ಒಂದು ವಿಷಯಕ್ಕೆ) |
| 01 | ಎಂ.ಎ (ಕನ್ನಡ, ಇಂಗ್ಲೀಷ್, ಸಮಾಜಶಾಸ್ತ್ರ, ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ ಮತ್ತು ಸಾರ್ವಜನಿಕ ಆಡಳಿತ), ಎಂ.ಕಾಂ ಹಾಗೂ ಎಂ.ಎಸ್ಸಿ ಗಣಿತಶಾಸ್ತ್ರ | 1000.00 | 200.00 |
| 02 | ಎಂ.ಎಸ್ ಡಬ್ಲ್ಯು, ಎಂ.ಕಾಂ(ಐ.ಎಸ್) ಮತ್ತು ಎಂ.ಎಸ್ಸಿ ಮನಃಶಾಸ್ತ್ರ | 1000.00 | 265.00 |
| 03 | ಎಂ.ಎ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ | 1000.00 | 200.00 |
| 04 | ಎಂ.ಎಸ್ಸಿ (ಭೌತಶಾಸ್ತ್ರ, ರಸಾಯನಶಾಸ್ತ್ರ, ಪರಿಸರ ವಿಜ್ಞಾನ, ಜೀವರಸಾಯಶಾಸ್ತ್ರ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ, ಪ್ರಾಣಿಶಾಸ್ತ್ರ, ಸಸ್ಯಶಾಸ್ತ್ರ, ಸಾವಯವ ರಸಾಯನಶಾಸ್ತ್ರ, ವಿದ್ಯುನ್ಮಾನ ಮಾಧ್ಯನ ) ಮತ್ತು ಎಂ.ಎಸ್ ಕಮ್ಯುನಿಕೇಷನ್ | 1000.00 | 200.00 |
| 05 | ಎಂ.ಎಸ್ಸಿ ಜೀವ ತಂತ್ರಜ್ಞಾನ ಮತ್ತು ಸೂಕ್ಷ್ಮ ಜೀವಶಾಸ್ತ್ರ | 2000.00 | 200.00 |
| 06 | ಪಿ.ಜಿ ಡಿಪ್ಲೋಮಾ (Coconut Plantation, Environmental impact) | 1000.00 | 265.00 |

*** ವಿದ್ಯಾರ್ಥಿಯು ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿದ್ದಲ್ಲಿ ಸೆಮಿಸ್ಟರ್‌ವಾರು ಪೂರ್ಣ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಬೇಕು. ಎಲ್ಲಾ ವರ್ಗಗಳ ಪೂರಕ 2020-21ನೇ ಶೈಕ್ಷಣಿಕ ಸಾಲಿನ EMS ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ (ಸೆಮಿಸ್ಟರ್‌ವಾರು) ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಿಕೊಳ್ಳುವುದು. ಎಲ್ಲಾ ವರ್ಗದ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು. (ಪ್ರತಿ ಸೆಮಿಸ್ಟರ್‌ಗೆ ಅನ್ವಯಿಸುವಂತೆ)

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ | 156-00 |
| 2. | ಆನ್‌ಲೈನ್ ಅರ್ಜಿ ಶುಲ್ಕ | 30-00 |
| 3. | ಅರ್ಜಿ ಪರಿಶೀಲನಾ ಶುಲ್ಕ | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee) | 40-00 |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ (Per Practical) | 150-00 |
| 6. | ಪ್ರಾಜೆಕ್ಟ್ ಶುಲ್ಕ (Per Project) (ಅನ್ವಯಿಸಿದ್ದಲ್ಲಿ ಮಾತ್ರ.) | 200-00 |
| 7. | ಕಿರು ಪ್ರಬಂಧ ಶುಲ್ಕ (Per Dissertation) (ಅನ್ವಯಿಸಿದ್ದಲ್ಲಿ ಮಾತ್ರ.) | 200-00 |
| 8. | ಮೌಖಿಕ ಸಂದರ್ಶನ (Per Viva-Voce ) (ಅನ್ವಯಿಸಿದ್ದಲ್ಲಿ ಮಾತ್ರ.) | 150-00 |

(ಪು.ತಿ.ನೋ)

ನಾಲ್ಕನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಅನ್ವಯಿಸಿದ್ದಲ್ಲಿ ಮಾತ್ರ (Dissertation/ Project Work/per Viva-Voce) 200+150=350/- ಶುಲ್ಕವನ್ನು **(UUCMS)** ಎಲ್ಲಾ ವಿದ್ಯಾರ್ಥಿಗಳು **SB Collect** ನಲ್ಲಿ **Finance officer Tumkur University, Tumkur** ಮುಖಾಂತರ ಶುಲ್ಕವನ್ನು ಪಾವತಿಸಿ ರಸೀದಿಯನ್ನು ಸಂಬಂಧಪಟ್ಟ ವಿಭಾಗಗಳು/ಕಾಲೇಜುಗಳಿಗೆ ಸಲ್ಲಿಸುವುದು.

**ವಿಶೇಷ ಸೂಚನೆ:**

1. **2020-21 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ದ್ವಿತೀಯ ಮತ್ತು ನಾಲ್ಕನೇ (ಪೂರಕ) ಸೆಮಿಸ್ಟರ್ ನ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಶುಲ್ಕ ಪಾವತಿಸಿಕೊಂಡು ಸದರಿ ವಿದ್ಯಾರ್ಥಿಗಳ ವಿವರವನ್ನು EMS ನಲ್ಲಿ ಕಡ್ಡಾಯವಾಗಿ ನಮೂದಿಸುವುದು.**

2. ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ವಿಷಯಗಳಿಗೆ/ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು.

ಪರೀಕ್ಷಾ ವೇಳಾಪಟ್ಟಿ ಮತ್ತು ಪರೀಕ್ಷಾ ಕೇಂದ್ರಗಳ ವಿವರಗಳನ್ನು ನಂತರದ ದಿನಗಳಲ್ಲಿ ತಿಳಿಸಲಾಗುವುದು.

**ಗಮನಿಸಬೇಕಾದ ದಿನಾಂಕಗಳು**

| | | |
|---|---|---|
| 1. | ಪರೀಕ್ಷಾ ಶುಲ್ಕ ಪಾವತಿಸುವ ಪ್ರಾರಂಭ ದಿನಾಂಕ | 31.07.2024 |
| 2. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 20.08.2024 |
| 3. | ವಿದ್ಯಾರ್ಥಿಗಳಿಗೆ ರೂ 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 23.08.2024 |
| 4. | ವಿದ್ಯಾರ್ಥಿಗಳಿಗೆ ರೂ ೫೦೦/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 26.08.2024 |
| 5. | ಕಾಲೇಜಿನವರು ಶುಲ್ಕವನ್ನು ವಿಶ್ವವಿದ್ಯಾನಿಲಯ ಖಾತೆಗೆ ಪಾವತಿಸಲು ಮತ್ತು ಶುಲ್ಕಗಳ ವಿವರವನ್ನು ಕಾಲೇಜಿನವರು/ ವಿಭಾಗದವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 30.08.2024 |

**ಕಾಲೇಜು/ವಿಭಾಗದ ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಮುಕ್ತ ಆಯ್ಕೆ ಪತ್ರಿಕೆಗಳನ್ನು (Open Elective Papers) ಖಚಿತಪಡಿಸಿಕೊಂಡು ನಂತರ ಸರಿಯಾಗಿ ಆನ್‌ಲೈನ್‌ಲ್ಲಿ ನಮೂದಿಸುವುದು.**

- ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರವನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಸಂಬಂಧಿಸಿದ ವಿಷಯಗಳಿಗೆ/ ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ, ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಯವಾದಲ್ಲಿ ಸಂಬಂಧಪಟ್ಟ ನಿರ್ದೇಶಕರು/ಪ್ರಾಂಶುಪಾಲರು/ಮುಖ್ಯಸ್ಥರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.
- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಕಾಯ್ದೆ 2000 ರ ಅಧಿನಿಯಮ 60, 61 & 68 ರಂತೆ ವಿಶ್ವವಿದ್ಯಾನಿಲಯದಿಂದ ದಾಖಲಾತಿ ಅನುಮೋದನೆಗೊಳ್ಳದ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳಬಾರದು ಮತ್ತು ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಬಾರದು.
- ಮುಖ್ಯಸ್ಥರು/ನಿರ್ದೇಶಕರು/ಪ್ರಾಂಶುಂಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಆನ್‌ಲೈನ್‌ನಲ್ಲಿ ಕೋರುವ ಎಲ್ಲಾ ಮಾಹಿತಿಯನ್ನು ಸರಿಯಾಗಿ ನಮೂದಿಸಬೇಕು.
- **ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ.**
- **ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.**
- **ಪರೀಕ್ಷಾ ಕೇಂದ್ರ ಹೊಂದಿರುವ ಕಾಲೇಜಿನವರು ತಮ್ಮ ಕೇಂದ್ರದಲ್ಲಿ ಪರೀಕ್ಷೆ ನಡೆಯುವ ಒಟ್ಟು ದಿನಗಳಲ್ಲಿ ಒಂದು ದಿನದ ಗರಿಷ್ಠ ವಿದ್ಯಾರ್ಥಿಗಳ ಸಂಖ್ಯೆಯನ್ನು ನಮೂದಿಸಿ ಪ್ರತಿ ವಿದ್ಯಾರ್ಥಿಗೆ ವಿಶ್ವವಿದ್ಯಾನಿಲಯವು ವಿಭಾಗವಾರು ನಿಗದಿಪಡಿಸಿರುವ ದರಗಳಂತೆ ಪ್ರತ್ಯೇಕ ಹುಂಡಿಗಳನ್ನು ಸಿದ್ಧಪಡಿಸಿ ಪರೀಕ್ಷಾ ವಿಭಾಗಕ್ಕೆ ಸಲ್ಲಿಸುವುದು.

(ಪು.ತಿ.ನೋ.)

ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ. ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

**ವಿ.ಸೂ.: ಪರೀಕ್ಷಾ ಶುಲ್ಕ ಪಾವತಿಸಿರುವ ಪಟ್ಟಿಯನ್ನು ದ್ವಿ-ಪ್ರತಿಗಳಲ್ಲಿ ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ದಿನಾಂಕ: 30.08.2024 ತಪ್ಪದೇ ಈ ಕೆಳಕಂಡ ನಮೂನೆಯಲ್ಲಿ ಸಲ್ಲಿಸುವುದು.**

**ನಮೂನೆ**

| ಕ್ರಸಂ. | ವಿದ್ಯಾರ್ಥಿಯ ಹೆಸರು | ನೋಂದಣಿ ಸಂಖ್ಯೆ | ತೆಗೆದುಕೊಂಡಿರುವ ವಿಷಯ | ಸೆಮಿಸ್ಟರ್ | ಶುಲ್ಕ ಪಾವತಿಸಿದ ವಿವರ & ದಿನಾಂಕ |
|---|---|---|---|---|---|
| 1. | | | | | |
| 2. | | | | | |

ವಿಶ್ವವಿದ್ಯಾನಿಲಯ ಧನಸಹಾಯ ಆಯೋಗ(ಯು.ಜಿ.ಸಿ.)ದ ನಿರ್ದೇಶನದ ಅನುಸಾರ D.O.No.F.12-1/2015 (CPP-II) 15th October 2015, ವಿದ್ಯಾರ್ಥಿಯು ಸ್ನಾತಕೋತ್ತರ ಪದವಿಗೆ ಪ್ರವೇಶ ಪಡೆದ ವರ್ಷದಿಂದ 04 ಶೈಕ್ಷಣಿಕ ವರ್ಷದೊಳಗೆ ಸ್ನಾತಕೋತ್ತರ ಪದವಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

ಪ್ರಾಯೋಗಿಕ ಪರೀಕ್ಷೆಗಳನ್ನು ಸೈದ್ಧಾಂತಿಕ ಪರೀಕ್ಷೆಗಳ ನಂತರ UUCMS ತಂತ್ರಾಂಶದಲ್ಲಿ ನಿಗಧಿಪಡಿಸಲಾದ ದಿನಾಂಕದೊಳಗೆ ನಡೆಸತಕ್ಕದ್ದು. ಪ್ರಾಯೋಗಿಕ ಪರೀಕ್ಷಾ ವೇಳಾಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳ ಅಧ್ಯಕ್ಷರುಗಳಿಂದ ಅನುಮೋದನೆ ಪಡೆದುಕೊಂಡು UUCMS ತಂತ್ರಾಂಶದಲ್ಲಿ ನಮೂದಿಸುವುದು ಮತ್ತು ಮುಖ್ಯಸ್ಥರು/ ಸಂಯೋಜಕರು/ಪ್ರಾಂಶುಪಾಲರುಗಳು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಪ್ರಕಟಿಸುವುದು.

**ಆಂತರಿಕ ಅಂಕಗಳನ್ನು ಸಲ್ಲಿಸುವ ಕುರಿತು ಸೂಚನೆಗಳು:**

1. ಸೈದ್ಧಾಂತಿಕ (Theory) ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ UUCMS ತಂತ್ರಾಂಶದಲ್ಲಿ ನಿಗಧಿಪಡಿಸಲಾದ ದಿನಾಂಕದೊಳಗೆ ಆಂತರಿಕ ಅಂಕಗಳನ್ನು ಮತ್ತು ವಿದ್ಯಾರ್ಥಿಗಳ ಹಾಜರಾತಿ ವಿವರಗಳನ್ನು ಮುಖ್ಯಸ್ಥರು/ಸಂಯೋಜಕರು ಕಾಲೇಜಿನವರು ನಮೂದಿಸಿ, ಪರಿಶೀಲಿಸಿ ದಿನಾಂಕ:**05.09.2024** ರೊಗಳಗೆ UUCMS ತಂತ್ರಾಂಶದಲ್ಲಿ ನಮೂದಿಸುವುದು ಹಾಗೂ ದೃಢೀಕೃತ ಪ್ರತಿಯನ್ನು ಕುಲಸಚಿವರು(ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸುವುದು ವಿಳಂಬವಾದಲ್ಲಿ **ದಿನವೊಂದಕ್ಕೆ ರೂ. 1,000/- ಗಳಂತೆ ಗರಿಷ್ಠ ರೂ. 10,000-00 (ಹತ್ತು ಸಾವಿರ) ಗಳನ್ನು ದಂಡವಾಗಿ ವಿಧಿಸಲಾಗುತ್ತದೆ.**
2. ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನೀಡುವುದು ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರು/ಸಂಯೋಜಕರ ಜವಾಬ್ದಾರಿಯಾಗಿದ್ದು,ಯಾವುದೇ ರೀತಿಯ ಲೋಪದೋಷಗಳಾಗದಂತೆ ಎಚ್ಚರಿಕೆ ವಹಿಸುವುದು. ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಆಂತರಿಕ ಅಂಕಗಳನ್ನು ಬದಲಿಸುವುದಿಲ್ಲ.

**ಎಲ್ಲಾ, ಮುಖ್ಯಸ್ಥರು/ನಿರ್ದೇಶಕರು/ಪ್ರಾಂಶುಪಾಲರು ಸಹಕರಿಸಬೇಕಾಗಿ ಕೋರಲಾಗಿದೆ.**

**ಆದೇಶದ ಮೇರೆಗೆ,**

20/7/24

**ಕುಲಸಚಿವರು (ಪರೀಕ್ಷಾಂಗ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಮುಖ್ಯಸ್ಥರು/ ಸಂಯೋಜಕರು /ನಿರ್ದೇಶಕರು / ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ವಿಶ್ವವಿದ್ಯಾನಿಲಯ ಅಂತರ್ಜಾಲದಲ್ಲಿ ಪ್ರಕಟಿಸುವುದು
8. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಅಗತ್ಯ ಕ್ರಮಕ್ಕಾಗಿ
9. ಕಛೇರಿ ಪ್ರತಿ.